# ಮಂಗಳೂರು ವಿಶ್ವವಿದ್ಯಾನಿಲಯ

ಸಂಖ್ಯೆ: ಮಂವಿ/ಕುಸ/ಸಿಂಡಿ/ಎಸ್2/87/2021/11469

ಕುಲಸಚಿವರ (ಕಛೇರಿ)
ಮಂಗಳಗಂಗೋತ್ರಿ-574199

ದಿನಾಂಕ: 02.11.2021

**ತುರ್ತು ರವಾನೆ**

ರಿಗೆ:

**ಸಿಂಡಿಕೇಟಿನ ಎಲ್ಲಾ ಮಾನ್ಯ ಸದಸ್ಯರುಗಳಿಗೆ.**

ಮಾನ್ಯರೇ,

ವಿಷಯ: ದಿನಾಂಕ 22.10.2021ರಂದು ನಡೆದ ಸಿಂಡಿಕೇಟಿನ 2021ನೇ ಸಾಲಿನ ಆರನೇ ಸಾಮಾನ್ಯ ಸಭೆಯ ನಡವಳಿಯ ಬಗ್ಗೆ.

------

ದಿನಾಂಕ 22.10.2021 ರಂದು ನಡೆದ ಸಿಂಡಿಕೇಟಿನ 2021ನೇ ಸಾಲಿನ ಆರನೇ ಸಾಮಾನ್ಯ ಸಭೆಯ ನಡವಳಿಯನ್ನು ಮುಂದಿನ ಸಿಂಡಿಕೇಟು ಸಭೆಯಲ್ಲಿ ದೃಢೀಕರಿಸುವ ಸಲುವಾಗಿ ಈ ಮೂಲಕ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ. ಆಕ್ಷೇಪಣೆಗಳು ಇದ್ದಲ್ಲಿ ನಡವಳಿ ತಲುಪಿದ **ಏಳು ದಿನಗಳೊಳಗಾಗಿ** ಲಿಖಿತವಾಗಿ ಈ ಕೆಳಗೆ ಸಹಿ ಮಾಡಿದವರಿಗೆ ಕಳುಹಿಸಿಕೊಡಲು ಕೋರಲಾಗಿದೆ.

ತಮ್ಮ ವಿಶ್ವಾಸಿ,

ಕುಲಸಚಿವರು.

**ಪ್ರತಿಗಳು :**

1. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ, ರಾಜಭವನ ಬೆಂಗಳೂರು–560 001
2. ಸರಕಾರದ ಅಪರ ಮುಖ್ಯ ಕಾರ್ಯದರ್ಶಿ, (ಉನ್ನತಶಿಕ್ಷಣ) ಶಿಕ್ಷಣ ಇಲಾಖೆ, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು – 560 001.
3. ಕುಲಪತಿಯವರ ಆಪ್ತ ಸಹಾಯಕಿ/ಕುಲಸಚಿವರ ಆಪ್ತ ಸಹಾಯಕಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.

# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 22.10.2021ರಂದು ಪೂರ್ವಾಹ್ನ ಗಂಟೆ 10.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2021ನೇ ಸಾಲಿನ ಆರನೇ ಸಾಮಾನ್ಯ ಸಭೆಯ ನಡವಳಿಗಳು.**

## ಉಪಸ್ಥಿತ ಸದಸ್ಯರು:

1. ಪ್ರೊ. ಪಿ. ಸುಬ್ರಹ್ಮಣ್ಯ ಯಡಪಡಿತ್ತಾಯ — ಅಧ್ಯಕ್ಷರು
   ಕುಲಪತಿಗಳು
   ಮಂಗಳೂರು ವಿಶ್ವವಿದ್ಯಾನಿಲಯ,
   ಮಂಗಳಗಂಗೋತ್ರಿ-574199.

2. ಡಾ. ಜೆನಿಫರ್ ಲೋಲಿಟಾ ಸಿ. — ಸದಸ್ಯರು
   ಜಂಟಿ ನಿರ್ದೇಶಕರು
   ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಚೇರಿ,
   ಮಂಗಳೂರು – 560 001.
   (ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ)

3. ಪ್ರೊ. ಬಿ. ಉದಯ, — " –
   ಡೀನರು, ಕಲಾ ನಿಕಾಯ ಹಾಗೂ ಪ್ರಾಧ್ಯಾಪಕರು
   ಸ್ನಾತಕೋತ್ತರ ಇತಿಹಾಸ ಅಧ್ಯಯನ ವಿಭಾಗ
   ಮಂಗಳೂರು ವಿಶ್ವವಿದ್ಯಾನಿಲಯ,
   ಮಂಗಳಗಂಗೋತ್ರಿ - 574 199.

4. ಪ್ರೊ. ಕರುಣಾಕರ್ ಎ. ಕೋಟೆಗಾರ್, — " –
   "ಶ್ರೀ ಅಣ್ಣಪ್ಪ", ಆರ್.ಪಿ.ನಗರ,
   ಇಂದ್ರಾಳಿ ದೇವಸ್ಥಾನದ ಹತ್ತಿರ
   ಉಡುಪಿ – 576 012.

5. ಶ್ರೀ ರವಿಚಂದ್ರ ಪಿ. ಎಂ. — " –
   ನಂ. 103, ಪೂಜನ್ ಎನ್‌ಕ್ಲೇವ್
   6ನೇ ಅಡ್ಡ ರಸ್ತೆ, ಗಾಂಧಿ ನಗರ,
   ಮಣ್ಣಗುಡ್ಡೆ, ಮಂಗಳೂರು – 575 001.

6. ಫಾದರ್ ಆಲ್ವಿನ್ ಸೆರಾವೊ — " –
   ಪ್ರಾಂಶುಪಾಲರು,
   ಸಂತ ಆಂಟನಿ ಕಾಲೇಜ್ ಆಫ್ ಕಾಮರ್ಸ್
   ನಾರಾವಿ ಪೋಸ್ಟ್,
   ಬೆಳ್ತಂಗಡಿ ತಾಲೂಕು – 574 214.

7. ಡಾ. ಎನ್. ಪಿ. ನಾರಾಯಣ ಶೆಟ್ಟಿ, — ಸದಸ್ಯರು
ಪ್ರಾಂಶುಪಾಲರು,
ಭಂಡಾರ್‌ಕಾರ್ಸ್ ಕಾಲೇಜು,
ಕುಂದಾಪುರ- 576 201.

8. ಶ್ರೀ ಪ್ರಸನ್ನ ಶೆಟ್ಟಿ
ಪ್ರಾಂಶುಪಾಲರು,
ಲಕ್ಷ್ಮೀ ಮೆಮೋರಿಯಲ್ ಕಾಲೇಜ್ ಆಫ್
ಹೋಟೆಲ್ ಮ್ಯಾನೇಜ್‌ಮೆಂಟ್
ಮಂಗಳೂರು – 575 003.

9. ಶ್ರೀಮತಿ ರಾಧಿಕಾ ಪೈ. ಟಿ, — " –
ಪ್ರಾಂಶುಪಾಲರು,
ಮಾಧವ ಪೈ ಮೆಮೋರಿಯಲ್ ಕಾಲೇಜು,
ವಿದ್ಯಾನಗರ, ಮಣಿಪಾಲ – 576 104.

10. ಡಾ. ಎಂ. ಎಸ್. ತಳವಾರ, — " –
ನಂ 777, "ಜೇನುಗೂಡು"
ಬನಶಂಕರಿ, 6ನೇ ಹಂತ, 5ನೇ ಬ್ಲಾಕ್,
ಮೆಟ್ಟಕಲ್ಲಪಾಳ್ಯ, ಬೆಂಗಳೂರು – 560 085.

11. ಶ್ರೀ ಕೆ. ರಮೇಶ, — " –
ನಂ. 1004, ಮಹಾಬಲೇಶ್ವರ ಕ್ಲಾಸಿಕ್ ರೂಬಿ,
ವಾಟರ್ ಟ್ಯಾಂಕ್ ಎದುರುಗಡೆ,
ಶ್ರೀ ಗೋಪಾಲಕೃಷ್ಣ ದೇವಸ್ಥಾನದ ಹತ್ತಿರ,
ಶಕ್ತಿನಗರ, ಮಂಗಳೂರು – 575 016.

12. ಡಾ. ಪಾರ್ವತಿ ಅಪ್ಪಯ್ಯ, — " –
"ಹಿಮವನ", ಮುಳಿಯಾ ಬಡಾವಣೆ
ಎಫ್.ಎಂ.ಕೆ.ಎಂ.ಸಿ. ಕಾಲೇಜು ಹಿಂಭಾಗ,
ಮಡಿಕೇರಿ ಅಂಚೆ, ಕೊಡಗು ಜಿಲ್ಲೆ

13. ಶ್ರೀ ಮೋಹನ್ ಪಡಿವಾಳ್, — " –
"ಸಮೃದ್ಧ", ಎಂ.ಎಸ್. ನಗರ,
11ನೇ ಅಡ್ಡ ರಸ್ತೆ, ತೆಲ್ಲಾರ್ ರಸ್ತೆ,
ಕಾರ್ಕಳ, ಉಡುಪಿ ಜಿಲ್ಲೆ – 574 104.

14. ಡಾ. ಸಿಪ್ರಿಯನ್ ಮೊಂತೆರೊ, — " –
ಪ್ರಾಂಶುಪಾಲರು ಮತ್ತು ಸಹ ನಿರ್ದೇಶಕರು,
ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು – 575001.
(ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ)

| | | |
|---|---|---|
| 15. | ಪ್ರೊ. ಪಿ. ಎಲ್. ಧರ್ಮ,<br>ಕುಲಸಚಿವರು (ಪರೀಕ್ಷಾಂಗ)<br>ಮಂಗಳೂರು ವಿಶ್ವವಿದ್ಯಾನಿಲಯ<br>ಮಂಗಳಗಂಗೋತ್ರಿ – 574 199 | ಸದಸ್ಯರು |
| 16. | ಪ್ರೊ. ಕಿಶೋರ್ ಕುಮಾರ್ ಸಿ.ಕೆ.<br>ಕುಲಸಚಿವರು (ಆಡಳಿತ)<br>ಮಂಗಳೂರು ವಿಶ್ವವಿದ್ಯಾನಿಲಯ<br>ಮಂಗಳಗಂಗೋತ್ರಿ – 574 199 | ಸದಸ್ಯ ಕಾರ್ಯದರ್ಶಿ |

**ವಿಶೇಷ ಆಹ್ವಾನಿತರು:**

1. ಪ್ರೊ. ಬಿ. ನಾರಾಯಣ,
ಹಣಕಾಸು ಅಧಿಕಾರಿ (ಪ್ರಭಾರ)
ಮಂಗಳೂರು ವಿಶ್ವವಿದ್ಯಾನಿಲಯ
ಮಂಗಳಗಂಗೋತ್ರಿ – 574 199.

**ಅನುಪಸ್ಥಿತ ಸದಸ್ಯರು:**

| | | |
|---|---|---|
| 1. | ಶ್ರೀ ವಿವೇಕಾನಂದ ಪನಿಯಾಲ,<br>ಪನಿಯಾಲ ಹೌಸ್, ಕೊಡಿಯಾಳ ಗುತ್ತು<br>ಕೊಡಿಯಾಲ್ ಬೈಲು ಪೂರ್ವ ಮುಖ್ಯರಸ್ತೆ,<br>ಮಂಗಳೂರು – 575 004. | ಸದಸ್ಯರು |
| 2. | ಶ್ರೀ ರವೀಂದ್ರನಾಥ ರೈ,<br>ಬಿನ್ ದಿ. ಕ್ಯಾಪ್ಟನ್ ಬಾಲಕೃಷ್ಣ ರೈ. ಬಿ. ಎಸ್.<br>"ಲಕ್ಷ್ಮೀ ನಿವಾಸ" 3ನೇ ಕ್ರಾಸ್, ಕೊಡಿಯಾಲ್ ಗುತ್ತು ಪೂರ್ವ,<br>ಕೊಡಿಯಾಲ್ ಬೈಲ್ ಅಂಚೆ, ಮಂಗಳೂರು – 3. | – " – |
| 3. | ತಾಂತ್ರಿಕ ಶಿಕ್ಷಣ ನಿರ್ದೇಶಕರು,<br>ಕರ್ನಾಟಕ ರಾಜ್ಯ<br>ಅರಮನೆ ರಸ್ತೆ, ಬೆಂಗಳೂರು – 560 001. | – " – |
| 4. | ವೈದ್ಯಕೀಯ ಶಿಕ್ಷಣ ನಿರ್ದೇಶಕರು,<br>ಕರ್ನಾಟಕ ರಾಜ್ಯ, ಆನಂದರಾವ್ ವೃತ್ತ<br>ಬೆಂಗಳೂರು – 560 009. | – " – |
| 5. | ನಿರ್ದೇಶಕರು,<br>ಪದವಿ ಪೂರ್ವ ಶಿಕ್ಷಣ ಇಲಾಖೆ<br>ಪದವಿ ಪೂರ್ವ ಶಿಕ್ಷಣ ಭವನ,<br>18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ<br>ಮಲ್ಲೇಶ್ವರಂ, ಬೆಂಗಳೂರು – 560 003. | – " – |

*********

# ಮಂಗಳೂರು ವಿಶ್ವವಿದ್ಯಾನಿಲಯ

ದಿನಾಂಕ 22.10.2021ರಂದು ಪೂರ್ವಾಹ್ನ ಗಂಟೆ 10.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2021ನೇ ಸಾಲಿನ ಆರನೇ ಸಾಮಾನ್ಯ ಸಭೆಯ ನಡವಳಿಗಳು.

ಉಪಸ್ಥಿತರು:

ಅನುಪಸ್ಥಿತರು:

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

## ಪ್ರಾಸ್ತಾವಿಕ

ಮಾನ್ಯ ಕುಲಪತಿಗಳು ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಈ ಕೆಳಗಿನ ವಿಷಯಗಳನ್ನು ಸಭೆಗೆ ತಿಳಿಸಿದರು.

1. ಡಾ. ಅರಬಿ, ಪ್ರಾಧ್ಯಾಪಕರು, ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ವಿಭಾಗ ಇವರ ವಿರುದ್ಧ ಮಂಗಳೂರು ವಿಶ್ವವಿದ್ಯಾನಿಲಯವು ಹೂಡಿದ್ದ ರಿಟ್ ಅಪೀಲನ್ನು ವಿಶ್ವವಿದ್ಯಾನಿಲಯದ ಪರವಾಗಿ ಶೀಘ್ರವೇ ವಿಲೇವಾರಿಗೊಳಿಸುವಂತೆ, ವಿಶ್ವವಿದ್ಯಾನಿಲಯದ ನ್ಯಾಯವಾದಿಯಾಗಿರುವ ಶ್ರೀ ಅರುಣ್ ಶ್ಯಾಂ ಇವರಿಗೆ ತುರ್ತು ಪತ್ರ ಬರೆಯಲಾಗುವುದೆಂಬುದಾಗಿ ಸಭೆಗೆ ತಿಳಿಸಿದರು.
2. ವಿಶ್ವವಿದ್ಯಾನಿಲಯದ ವಾರ್ಷಿಕ ಘಟಿಕೋತ್ಸವವನ್ನು ನಡೆಸುವ ಬಗ್ಗೆ ಅನುಸರಿಸಬೇಕಾದ ಮಾರ್ಗಸೂಚಿಗಳ ಬಗ್ಗೆ ಘನತೆವೆತ್ತ ರಾಜ್ಯಪಾಲರ ಕಚೇರಿಯಿಂದ ಬಂದಿರುವ ಪತ್ರವನ್ನು ಸಭೆಯ ಗಮನಕ್ಕೆ ತರುತ್ತಾ ಪತ್ರದಲ್ಲಿ ನಮೂದಿಸಿರುವ ಅಂಶಗಳನ್ನು ಸಭೆಗೆ ತಿಳಿಸಿದರು. ಹಾಗೂ ಈ ಬಗ್ಗೆ ಮುಂದಿನ ಸಿಂಡಿಕೇಟ್ ಸಭೆಯಲ್ಲಿ ಕಾರ್ಯಸೂಚಿ ಮಂಡಿಸುವುದಾಗಿ ಸಭೆಗೆ ತಿಳಿಸಿದರು.
3. ಮಾನ್ಯ ಮುಖ್ಯಮಂತ್ರಿ ಮತ್ತು ಮಾನ್ಯ ಉನ್ನತ ಶಿಕ್ಷಣ ಸಚಿವರು, ಕರ್ನಾಟಕ ಸರಕಾರ ಇವರ ನಿರ್ದೇಶನದ ಮೇರೆಗೆ ರಾಷ್ಟ್ರೀಯ ಶಿಕ್ಷಣ ನೀತಿ 2020ನ್ನು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅರ್ಥಪೂರ್ಣವಾಗಿ ಮತ್ತು ಪರಿಣಾಮಕಾರಿಯಾಗಿ ಅಳವಡಿಸುವ ಸಲುವಾಗಿ, ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಕಾಲೇಜುಗಳಿಗೆ ದಿನಾಂಕ 25.10.2021ರಂದು ಪೂರ್ವಾಹ್ನ ಗಂಟೆ 10.00 ರಿಂದ ಅಪರಾಹ್ನ ಗಂಟೆ 01.30ರವರೆಗೆ ಮಂಗಳೂರಿನ ಪುರಭವನದಲ್ಲಿ ಕಾರ್ಯಾಗಾರವನ್ನು ಹಮ್ಮಿಕೊಂಡಿರುವ ವಿಷಯವನ್ನು ಸಭೆಗೆ ತಿಳಿಸಿದರು. ಸದರಿ ಕಾರ್ಯಾಗಾರಕ್ಕೆ ಮಾನ್ಯ ಸಿಂಡಿಕೇಟು ಸದಸ್ಯರುಗಳನ್ನು ಆಹ್ವಾನಿಸಿದರು. ಸದರಿ ಕಾರ್ಯಕ್ರಮಕ್ಕೆ ವಿವಿಧ ನಿಕಾಯ, ಅಧ್ಯಯನ

ಮಂಡಳಿ ಅಧ್ಯಕ್ಷರು ಮತ್ತು ಸದಸ್ಯರುಗಳನ್ನು, ಘಟಕ ಮತ್ತು ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳನ್ನು, ಶಿಕ್ಷಕರನ್ನು ಮತ್ತು ವಿದ್ಯಾರ್ಥಿಗಳನ್ನು ಆಹ್ವಾನಿಸಲಾಗುವುದೆಂದು ಸಭೆಗೆ ತಿಳಿಸಿದರು.

ಮಾನ್ಯ ಸಿಂಡಿಕೇಟು ಸದಸ್ಯರುಗಳ ಅಪೇಕ್ಷೆ ಮೇರೆಗೆ ಕಾರ್ಯಕ್ರಮವನ್ನು online ಮೂಲಕವೂ ವೀಕ್ಷಿಸಲು ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

ಮಂಗಳೂರು ವಿಶ್ವವಿದ್ಯಾನಿಲಯದ ಐದು ಸ್ವಾಯತ್ತ ಕಾಲೇಜುಗಳಿಗೂ ರಾಷ್ಟ್ರೀಯ ಶಿಕ್ಷಣ ನೀತಿ 2020ನ್ನು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅಳವಡಿಸುವಾಗ ಅನುಸರಿಸಬೇಕಾದ ಮಾರ್ಗಸೂಚಿಗಳ ಬಗ್ಗೆ ವಿವರಿಸಲು ವಿಶ್ವವಿದ್ಯಾನಿಲಯ ಕಾಲೇಜು ಮಂಗಳೂರು ಇಲ್ಲಿ ದಿನಾಂಕ 25.10.2021ರಂದು ಅಪರಾಹ್ನ ಗಂಟೆ 02.30 ರಿಂದ ಅಪರಾಹ್ನ ಗಂಟೆ 04.00ರವರೆಗೆ ಕಾರ್ಯಾಗಾರವನ್ನು ಹಮ್ಮಿಕೊಳ್ಳುವುದಾಗಿ ಸಭೆಗೆ ತಿಳಿಸಿದರು.

4. ಮಂಗಳೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಪ್ರತಿ ಜಿಲ್ಲೆಯಲ್ಲಿ ಮುಂದಿನ ನವೆಂಬರ್ 2021ರಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ 2020ನ್ನು ಅರ್ಥಪೂರ್ಣವಾಗಿ ಮತ್ತು ಪರಿಣಾಮಕಾರಿಯಾಗಿ ಅಳವಡಿಸಲು ಎಲ್ಲಾ ಸಂಯೋಜಿತ ಕಾಲೇಜುಗಳಿಗೆ ಒಂದು ದಿನದ ಕಾರ್ಯಾಗಾರವನ್ನು ಆಯೋಜಿಸಲು ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

## II. ನಡವಳಿಗಳ ದೃಢೀಕರಣ

1. ದಿನಾಂಕ 27.08.2021ರಂದು ನಡೆದ 2021ನೇ ಸಾಲಿನ ಐದನೇ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

ದಿನಾಂಕ 27.08.2021ರಂದು ನಡೆದ 2021ನೇ ಸಾಲಿನ ಐದನೇ ಸಾಮಾನ್ಯ ಸಭೆಯ ನಡವಳಿಯನ್ನು ಈ ಕೆಳಗಿನ ತಿದ್ದುಪಡಿಗಳೊಂದಿಗೆ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ : ಸಾ.ಸ.5:1(2021)

ವಿಷಯ: ಸಂಯೋಜಿತ ಕಾಲೇಜುಗಳಲ್ಲಿ ನಡೆಸಲಾಗುವ ಸ್ನಾತಕೋತ್ತರ ಕಾರ್ಯಕ್ರಮಗಳನ್ನು ನಿಯಂತ್ರಿಸುವ ಮಾರ್ಗಸೂಚಿಗಳ ತಿದ್ದುಪಡಿ ಪರಿನಿಯಮದ ಅನುಮೋದನೆ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಸಭೆಗೆ ಮಂಡಿಸಲಾಯಿತು.

ಸಿಂಡಿಕೇಟು ಸಭೆಯು ಪರಿನಿಯಮದಲ್ಲಿನ ಈ ಕೆಳಗಿನ ತಿದ್ದುಪಡಿಗಳನ್ನು ನಿಯಾಮಾನುಸಾರ ಅನುಮೋದಿಸಿತು.

DRAFT AMEDMENT TO THE STATUTE GOVERNING THE GUIDELINES FOR PERMITTING POST-GRADUATE DEGREE PROGRAMMES IN AFFILIATED COLLEGES

| Sl. No. | Existing | As amended |
|---|---|---|
| 1. | **II. General:**<br><br>2. Only those colleges which have permanent affiliation or atleast ten years of continuous affiliation and have been accredited by the NAAC shall be eligible to start P.G. programmes. | **However, this clause may be exempted in the highly specialized professional disciplines to permit the Post Graduate programmes where there is no Under Graduate programmes in the University subject to the discretion of the University, considering the merit on case to case basis.** |
| 2. | **III. Infrastructure:**<br><br>13. The college shall be in undisputed possession of land measuring not less than five acres (not less than one acre in case of a college situated in a metropolitan city/ corporation limits.) It shall submit a blue print of the building proposed for the PG programme. | **Undisputed ownership and possession of land free from any or all encumbrances measuring not less than 1.5 acres if it is located in mega cities, 2 acres if it is located in metropolitan cities, and 5 acres if it is located in other cities/areas;** |

ಮೇಲಿನ ನಿರ್ಣಯಕ್ಕೆ ಸಂಬಂಧಿಸಿ, ಸಿಂಡಿಕೇಟು ಸದಸ್ಯರಾದ ಪ್ರೊ. ಕರುಣಾಕರ್ ಎ. ಕೋಟೆಗಾರ್ ಇವರು ತಿದ್ದುಪಡಿ ಪರಿನಿಯಮದಲ್ಲಿ ಸೂಚಿಸಿರುವ ಎರಡು ತಿದ್ದುಪಡಿಗಳ ಪೈಕಿ, ಕ್ರಮಸಂಖ್ಯೆ (1)ರಲ್ಲಿ ಸೂಚಿಸಿರುವ ತಿದ್ದುಪಡಿಗೆ ಸಂಬಂಧಿಸಿ ತಮ್ಮ ಒಪ್ಪಿಗೆ ಇಲ್ಲವೆಂಬುದಾಗಿ ತಿಳಿಸುತ್ತಾ, ತಮ್ಮ Dissent Note ನ್ನು ಈ ಕೆಳಗಿನಂತೆ ಸಲ್ಲಿಸಿದರು.

I am not in favour of encouraging any institutions which doesn't have prior permanent long-term affiliation to Mangalore University to start only new professional courses that has more demand and as per NEP we can't encourage a particular new colleges which doesn't have multidisciplinary teaching learning environment. I am also of the opinion that this provision will encourage commercialization of educations. Instead we have to encourage our well established multidisciplinary affiliated colleges to start professional postgraduate courses which have more employability.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ : ಸಾ.ಸ.5:2(2021) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜನೆಗೊಳಪಟ್ಟ ಸಂಸ್ಥೆಗಳನ್ನು ಸಂಶೋಧನಾ ಕೇಂದ್ರವನ್ನಾಗಿ ಗುರುತಿಸಿ ಮಾನ್ಯತೆ ನೀಡುವ ಮಾರ್ಗಸೂಚಿಯ ಬಗ್ಗೆ. |
| ನಿರ್ಣಯ: | ಪ್ರಸ್ತಾವನೆಯನ್ನು ಚರ್ಚಿಸಲಾಯಿತು. ಪ್ರಸ್ತಾವನೆಯಲ್ಲಿ ನಮೂದಿಸಲಾದ ಮಾರ್ಗಸೂಚಿ ಮತ್ತು ಅನುಶಾಸನದಲ್ಲಿ ಈ ಕೆಳಗಿನ ಅಂಶವನ್ನು ಹೆಚ್ಚುವರಿಯಾಗಿ ಸೇರ್ಪಡಿಸಬೇಕೆಂಬುದಾಗಿ ನಿರ್ಣಯಿಸಿ ಅನುಮೋದಿಸಲಾಯಿತು.<br>e. The College which intends to start Research Centre in any subject shall have Post Graduate programme in the respective subject. |

2. ದಿನಾಂಕ 13.09.2021ರಂದು ನಡೆದ 2021ನೇ ಸಾಲಿನ ತೃತೀಯ ವಿಶೇಷ ಸಭೆಯ ನಡವಳಿಯ ದೃಢೀಕರಣ

- ದೃಢೀಕರಿಸಲಾಯಿತು. -

## III. ಅನುಸರಣಾ ವರದಿಯ ಅನುಮೋದನೆ

1. ದಿನಾಂಕ 23.07.2021ರಂದು ನಡೆದ ಸಿಂಡಿಕೇಟಿನ 2021ನೇ ಸಾಲಿನ ಚತುರ್ಥ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.

ಅನುಮೋದಿಸಲಾಯಿತು.

## IV. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಎಸಿಸಿ:ಸಾ.ಸ.6:1(2021) |
| ವಿಷಯ: | ಮೂಡಬಿದ್ರೆ ತಾಲೂಕಿನ ಬನ್ನಡ್ಕದಲ್ಲಿ ವಿಶ್ವವಿದ್ಯಾನಿಲಯದ ಘಟಕ ಕಾಲೇಜಿನಲ್ಲಿ ಹೊಸ ಕಾರ್ಯಕ್ರಮಗಳನ್ನು ಪ್ರಾರಂಭಿಸುವ ಬಗ್ಗೆ. |
| ನಿರ್ಣಯ: | ಸದರಿ ಕಾಲೇಜಿನಲ್ಲಿ ಶೈಕ್ಷಣಿಕ ವರ್ಷ 2021-22ನೇ ಸಾಲಿಗೆ ಕನಿಷ್ಠ 15 ವಿದ್ಯಾರ್ಥಿಗಳು ಪ್ರವೇಶಾತಿಯನ್ನು ಪಡೆದಿರುವ ಕಾರ್ಯಕ್ರಮಗಳನ್ನು ಮಾತ್ರ ಪ್ರಾರಂಭಿಸಬಹುದೆಂಬುದಾಗಿ ಮತ್ತು ಕಾಲೇಜಿಗೆ ಬೇಕಾಗುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಿಂಡಿಕೇಟು ನಿರ್ಣಯಿಸಿತು. |

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.6:2(2021)

ವಿಷಯ: ನಿಟ್ಟೆ ಇನ್‌ಸ್ಟಿಟ್ಯೂಟ್ ಆಫ್ ಸ್ಪೀಚ್ ಆಂಡ್ ಹಿಯರಿಂಗ್ ಕಾಲೇಜಿನಲ್ಲಿ ನಡೆಸಲ್ಪಡುವ ಬಿ.ಎ.ಎಸ್.ಎಲ್.ಪಿ. ಕಾರ್ಯಕ್ರಮವನ್ನು ನಿಟ್ಟೆ (Deemed to be University)ಗೆ ವರ್ಗಾಯಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.6:3(2021)

ವಿಷಯ: ಶೈಕ್ಷಣಿಕ ವರ್ಷ 2021-22ನೇ ಸಾಲಿಗೆ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ಪ್ರವೇಶಾತಿ ಶುಲ್ಕಗಳನ್ನು ನಿಗದಿಪಡಿಸುವ ಬಗ್ಗೆ.

ನಿರ್ಣಯ: ಶೈಕ್ಷಣಿಕ ವರ್ಷ 2021-22ನೇ ಸಾಲಿನ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ಶುಲ್ಕ ಪರಿಷ್ಕರಣಾ ಸಮಿತಿಯು ಶಿಫಾರಸ್ಸು ಮಾಡಿರುವ ಶುಲ್ಕಗಳನ್ನು ನಿಗದಿಪಡಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

ಮುಂದುವರಿದು, ವಿಶ್ವವಿದ್ಯಾನಿಲಯದ ಕ್ಯಾಂಪಸ್‌ನ ಸ್ನಾತಕೋತ್ತರ ವಿಭಾಗಗಳಿಂದ E-magazine ನ್ನು ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯದಿಂದ ಪ್ರಕಟಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.6:4(2021)

ವಿಷಯ: ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇಲ್ಲಿ ಶೈಕ್ಷಣಿಕ ವರ್ಷ 2021-22ನೇ ಸಾಲಿನಿಂದ ಬಿ.ಎಸ್ಸಿ. (Physics, Mathematics, Geography) ಕಾರ್ಯಕ್ರಮವನ್ನು ಪ್ರಾರಂಭಿಸುವ ಬಗ್ಗೆ.

ನಿರ್ಣಯ: ಪ್ರಾಂಶುಪಾಲರು ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರು ತಮ್ಮ ಪತ್ರ ಸಂಖ್ಯೆ: ಫೀ ಮಾ ಕೆ. ಎಂ. ಕಾ. ಕಾ/362/2020-21 ದಿನಾಂಕ 21.10.2021 ರಲ್ಲಿ ಶೈಕ್ಷಣಿಕ ವರ್ಷ 2021-22ನೇ ಸಾಲಿನಿಂದ ತಮ್ಮ ಕಾಲೇಜಿನಲ್ಲಿ ಬಿ.ಎಸ್ಸಿ. (Physics, Mathematics, Geography) ಕಾರ್ಯಕ್ರಮವನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು ಹಿಂಪಡೆದಿರುವ ಬಗ್ಗೆ ತಿಳಿಸಿರುವ ವಿಷಯವನ್ನು ಸಭೆಯ ಗಮನಕ್ಕೆ ತಂದು, ಕಾರ್ಯಸೂಚಿಯನ್ನು ಹಿಂಪಡೆಯಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ:ಸಾ.ಸ.6:5(2021)

ವಿಷಯ: ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿ ಶೈಕ್ಷಣಿಕ ವರ್ಷ 2021-22ನೇ ಸಾಲಿನಿಂದ ಬಿ.ಬಿ.ಎ. (Tourism & Travel) ಕಾರ್ಯಕ್ರಮವನ್ನು ಪ್ರಾರಂಭಿಸುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.6:6(2021)

ವಿಷಯ: 2020-21ನೇ ಸಾಲಿನ ಪ್ರಥಮ ಮತ್ತು ದ್ವಿತೀಯ ಪದವಿ ತರಗತಿಗಳ ಕನ್ನಡ ಪಠ್ಯಪುಸ್ತಕದ ಹೆಚ್ಚುವರಿ ಪುಟಗಳ ಮುದ್ರಣ ವೆಚ್ಚ ಪಾವತಿ ಬಗ್ಗೆ.

ನಿರ್ಣಯ: ಮುದ್ರಣ ವೆಚ್ಚ ರೂ.73,550.00 (ರೂಪಾಯಿ ಎಪ್ಪತ್ತಮೂರು ಸಾವಿರದ ಐದುನೂರ ಐವತ್ತು ಮಾತ್ರ) ರ ಪಾವತಿಗೆ ಘಟನೋತ್ತರ ಮಂಜೂರಾತಿ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ:ಸಾ.ಸ.6:7(2021)

ವಿಷಯ: ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ವಾರ್ಷಿಕ ಸಂಚಿಕೆ ಮಂಗಳ ಗಂಗೆಯ ಮುದ್ರಣ ವೆಚ್ಚಕ್ಕೆ ಘಟನೋತ್ತರ ಮಂಜೂರಾತಿ ನೀಡುವ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.6:8(2021)

ವಿಷಯ: ಡಾ. ಬಿ.ಕೆ. ಸರೋಜಿನಿ, ಪ್ರಾಧ್ಯಾಪಕರು ಕೈಗಾರಿಕಾ ರಸಾಯನಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರಿಗೆ ಅಕ್ಟೋಬರ್ 2021 ರಿಂದ ಸೆಪ್ಟೆಂಬರ್ 2022ರವರೆಗೆ ಸಬ್ಬಾಟಿಕಲ್ ರಜೆ ಮಂಜೂರು ಮಾಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು. ಸಬ್ಬಾಟಿಕಲ್ ರಜೆಯ ಬಳಿಕ ಸಂಶೋಧನಾ ವರದಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬೇಕೆಂಬುದಾಗಿ ಸದರಿಯವರಿಗೆ ತಿಳಿಸಬೇಕೆಂಬುದಾಗಿ ನಿರ್ಣಯಿಸಲಾಯಿತು.

ಮುಂದುವರಿದು, ಈ ಹಿಂದೆ ಸಬ್ಬಾಟಿಕಲ್ ರಜೆಯಲ್ಲಿ ತೆರಳಿರುವ ಎಲ್ಲಾ ಪ್ರಾಧ್ಯಾಪಕರುಗಳು ತಮ್ಮ ಸಂಶೋಧನಾ ವರದಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿರುವ ಬಗ್ಗೆ ಪರಿಶೀಲಿಸಬೇಕೆಂಬುದಾಗಿ ಸಿಂಡಿಕೇಟು

ನಿರ್ಣಯಿಸಿತು. ಒಂದು ವೇಳೆ ಸಬ್ಬ್ಯಾಟಿಕಲ್ ರಜೆಯಲ್ಲಿ ತೆರಳಿರುವ ಯಾವುದೇ ಪ್ರಾಧ್ಯಾಪಕರು ತಮ್ಮ ಸಂಶೋಧನಾ ವರದಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸದಿದ್ದಲ್ಲಿ ಸದರಿಯವರುಗಳಿಗೆ ಕಾರಣ ಕೇಳಿ ನೋಟೀಸನ್ನು ಜಾರಿಗೊಳಿಸಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.6:9(2021)

ವಿಷಯ: ಡಾ. ಜಯಂತಿ ಎನ್., ಸಹ ಪ್ರಾಧ್ಯಾಪಕರು, ಕನ್ನಡ ವಿಭಾಗ, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರಿಗೆ ವಿಶ್ವವಿದ್ಯಾನಿಲಯದ ಸೇವೆಯಿಂದ ಸ್ವಯಂ ನಿವೃತ್ತಿ ಹೊಂದಲು ಅನುಮತಿ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಆಡಳಿತ:ಸಾ.ಸ.6:10(2021)

ವಿಷಯ: ಡಾ. ಶಿವಣ್ಣ, ಪ್ರಾಧ್ಯಾಪಕರು, ಸಾಗರ ಭೂವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ವೈದ್ಯಕೀಯ ವೆಚ್ಚ ಮರುಭರಣೆ ಬಗ್ಗೆ.

ನಿರ್ಣಯ: ಪ್ರಸ್ತಾವನೆಯಲ್ಲಿ ನಮೂದಿಸಿರುವ ವೈದ್ಯಕೀಯ ವೆಚ್ಚ ರೂ.1,04,840.00 (ರೂಪಾಯಿ ಒಂದು ಲಕ್ಷದ ನಾಲ್ಕು ಸಾವಿರದ ಎಂಟು ನೂರ ನಲವತ್ತು ಮಾತ್ರ)ನ್ನು ಪಾವತಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟ:ಸಾ.ಸ.6:11(2021)

ವಿಷಯ: ಸ್ನಾತಕೋತ್ತರ ಕಾರ್ಯಕ್ರಮವಾದ ಮಾಸ್ಟರ್ಸ್ ಇನ್ ಪಬ್ಲಿಕ್ ಹೆಲ್ತ್ ಅಧ್ಯಯನ ಮಂಡಳಿ ರಚನೆ ಬಗ್ಗೆ.

ನಿರ್ಣಯ: ಸರಕಾರದಿಂದ ವಿನಿಯಮ ಅನುಮೋದನೆಗೊಂಡ ಬಳಿಕ ಅಧ್ಯಯನ ಮಂಡಳಿ ರಚಿಸಲು ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟುಸಾ.ಸ.6:12(2021)

ವಿಷಯ: ಪದವಿ ಮಟ್ಟದ ರಾಜ್ಯಶಾಸ್ತ್ರ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

ನಿರ್ಣಯ: ಪದವಿ ಮಟ್ಟದ ರಾಜ್ಯಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಸಾ.ಸ.6:13(2021) |
| ವಿಷಯ: | ಪದವಿ ಮಟ್ಟದ ಸಮಾಜಶಾಸ್ತ್ರ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ. |
| ನಿರ್ಣಯ: | ಪದವಿ ಮಟ್ಟದ ಸಮಾಜಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಸಾ.ಸ.6:14(2021) |
| ವಿಷಯ: | ಪದವಿ ಮಟ್ಟದ ಆಂಗ್ಲ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ. |
| ನಿರ್ಣಯ: | ಪದವಿ ಮಟ್ಟದ ಆಂಗ್ಲ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಸಾ.ಸ.6:15(2021) |
| ವಿಷಯ: | ಪದವಿ ಮಟ್ಟದ ವಾಣಿಜ್ಯ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ. |
| ನಿರ್ಣಯ: | ಪದವಿ ಮಟ್ಟದ ವಾಣಿಜ್ಯ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಸಾ.ಸ.6:16(2021) |
| ವಿಷಯ: | ಶಿಕ್ಷಣ ಸಂಯುಕ್ತ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ. |
| ನಿರ್ಣಯ: | ಶಿಕ್ಷಣ ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಸಾ.ಸ.6:17(2021) |
| ವಿಷಯ: | ಸ್ನಾತಕೋತ್ತರ ಗಣಿತಶಾಸ್ತ್ರ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ. |
| ನಿರ್ಣಯ: | ಸ್ನಾತಕೋತ್ತರ ಗಣಿತಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಸಾ.ಸ.6:18(2021) |
| ವಿಷಯ: | ಪದವಿ ಮತ್ತು ಸ್ನಾತಕೋತ್ತರ ಮನ:ಶಾಸ್ತ್ರ ಸಂಯುಕ್ತ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ. |
| ನಿರ್ಣಯ: | ಪದವಿ ಮತ್ತು ಸ್ನಾತಕೋತ್ತರ ಮನಃಶಾಸ್ತ್ರ ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು. |

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.6:19(2021)

ವಿಷಯ: ಪದವಿ ಮಟ್ಟದ ಇತಿಹಾಸ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

ನಿರ್ಣಯ: ಪದವಿ ಮಟ್ಟದ ಇತಿಹಾಸ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಪ.ಜಾ.ಪ.ಪಂ ಘಟಕ:ಸಾ.ಸ.6:20(2021)

ವಿಷಯ: ಶ್ರೀ ಗಣೇಶ ಹೆಚ್., ಸಂಶೋಧನಾ ವಿದ್ಯಾರ್ಥಿ, ಭೌತಶಾಸ್ತ್ರ ವಿಭಾಗ ಇವರು ವಿದೇಶದಲ್ಲಿ ನಡೆಯುವ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಸಂಶೋಧನಾ ಪತ್ರಿಕೆಯನ್ನು ಮಂಡಿಸಲು ಅನುಮತಿ ಹಾಗೂ ತತ್ಸಬಂಧ ತಗಲುವ ಆರ್ಥಿಕ ಸಹಾಯಧನ ನೀಡುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಶ್ರೀ ಗಣೇಶ ಹೆಚ್., ಇವರಿಗೆ ಮುಂಗಡ ಮೊತ್ತ ರೂ.1,60,467.00 (ರೂಪಾಯಿ ಒಂದು ಲಕ್ಷದ ಅರವತ್ತು ಸಾವಿರದ ನಾಲ್ಕುನೂರ ಅರವತ್ತೇಳು ಮಾತ್ರ) ಮಂಜೂರು ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಪ.ಜಾ.ಪ.ಪಂ ಘಟಕ : ಸಾ.ಸ.6:21(2021)

ವಿಷಯ: ಶ್ರೀ ನಾಗರಾಜು ವೈ. ಎಸ್., ಸಂಶೋಧನಾ ವಿದ್ಯಾರ್ಥಿ, ಭೌತಶಾಸ್ತ್ರ ವಿಭಾಗ ಇವರು ವಿದೇಶದಲ್ಲಿ ನಡೆಯುವ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಸಂಶೋಧನಾ ಪತ್ರಿಕೆಯನ್ನು ಮಂಡಿಸಲು ಅನುಮತಿ ಹಾಗೂ ತತ್ಸಬಂಧ ತಗಲುವ ಆರ್ಥಿಕ ಸಹಾಯಧನ ನೀಡುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಶ್ರೀ ನಾಗರಾಜು ವೈ. ಎಸ್., ಇವರಿಗೆ ಮುಂಗಡ ಮೊತ್ತ ರೂ.1,60,467.00 (ರೂಪಾಯಿ ಒಂದು ಲಕ್ಷದ ಅರವತ್ತು ಸಾವಿರದ ನಾಲ್ಕುನೂರ ಅರವತ್ತೇಳು ಮಾತ್ರ) ಮಂಜೂರು ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಪ.ಜಾ.ಪ.ಪಂ ಘಟಕ : ಸಾ.ಸ.6:22(2021)

ವಿಷಯ: ಶ್ರೀ ವೀರೇಶ್ ಶಾಂತಪ್ಪ, ಸಂಶೋಧನಾ ವಿದ್ಯಾರ್ಥಿ, ಭೌತಶಾಸ್ತ್ರ ವಿಭಾಗ ಇವರು ವಿದೇಶದಲ್ಲಿ ನಡೆಯುವ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಸಂಶೋಧನಾ ಪತ್ರಿಕೆಯನ್ನು ಮಂಡಿಸಲು ಅನುಮತಿ ಹಾಗೂ ತತ್ಸಬಂಧ ತಗಲುವ ಆರ್ಥಿಕ ಸಹಾಯಧನ ನೀಡುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಶ್ರೀ ವೀರೇಶ್ ಶಾಂತಪ್ಪ, ಇವರಿಗೆ ಮುಂಗಡ ಮೊತ್ತ ರೂ.1,60,761.00 (ರೂಪಾಯಿ ಒಂದು ಲಕ್ಷದ ಅರವತ್ತು ಸಾವಿರದ ಏಳುನೂರ ಅರವತ್ತೊಂದು ಮಾತ್ರ) ಮಂಜೂರು ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.6:23(2021)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಮಂಜೂರಾದ ಶೀಘ್ರಲಿಪಿಗಾರ ಹುದ್ದೆಗಳಲ್ಲಿ ಎರಡು ಹುದ್ದೆಗಳನ್ನು ಸಂಖ್ಯಾರಿಕ್ತ ಹುದ್ದೆಗಳಿಗೆ ಹೊಂದಾಣಿಕೆ ಮಾಡುವುದಕ್ಕಾಗಿ ದಿನಾಂಕ 11.02.2008ರ ಅಧಿಸೂಚನೆ ಮೂಲಕ ಜಾರಿಗೊಳಿಸಲಾದ Statute relating to converstion of posts for the purpose of adjustment of Supernumerary posts in Mangalore Universityನ್ನು ನಿರಸನಗೊಳಿಸುವ ಬಗ್ಗೆ.

ನಿರ್ಣಯ: ಪರಿನಿಯಮವನ್ನು ನಿಯಮಾನುಸಾರವಾಗಿ ನಿರಸನಗೊಳಿಸಲು ಸರಕಾರಕ್ಕೆ ಕಳುಹಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಕಾನೂನು ಘಟಕ : ಸಾ.ಸ.6:24(2021)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಇಲೆಕ್ಟ್ರಾನಿಕ್ಸ್ ವಿಭಾಗದಲ್ಲಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸಿದ್ದ ಡಾ.ವಿ. ರಾಜಗೋಪಾಲ್ ರೆಡ್ಡಿ ಇವರು ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ಇತರರ ವಿರುದ್ಧ ಹೂಡಿರುವ ರಿಟ್ ಅರ್ಜಿ ಸಂಖ್ಯೆ:7154/2021ಗೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯದ ಪರವಾಗಿ ಹೂಡಲಾಗಿರುವ ಆಕ್ಷೇಪಣಾ ಹೇಳಿಕೆಗಳಿಗೆ ಘಟನೋತ್ತರ ಅನುಮೋದನೆ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ : ಸಾ.ಸ.6:25(2021)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಅಂತರಾಷ್ಟ್ರೀಯ ವಿದ್ಯಾರ್ಥಿಗಳಿಗೆ ವಸತಿನಿಲಯ, ತರಗತಿ ಕೊಠಡಿಗಳ ಸಂಕೀರ್ಣ ಕಟ್ಟಡ ಮತ್ತು ಅಡಿಟೋರಿಯಂ ಕಟ್ಟಡದ ಆಂತರಿಕ ಕಾಮಗಾರಿಯ ಭದ್ರತಾ ಠೇವಣಿಯ ವಿನಾಯತಿ ಬಗ್ಗೆ.

ನಿರ್ಣಯ: M/s. BSR Infratech India Ltd ಇವರು ಈಗಾಗಲೇ ವಿಶ್ವವಿದ್ಯಾನಿಲಯದ ಕಾರ್ಯಕಾರಿ ಅಭಿಯಂತರರಿಗೆ ನೀಡಿರುವ ಕಾನೂನು ನೋಟೀಸನ್ನು

ಹಿಂಪಡೆಯುವ ಷರತ್ತಿನ ಮೇರೆಗೆ ಕಾಮಗಾರಿಯ ಭದ್ರತಾ ಠೇವಣಿ ಮೊತ್ತದಲ್ಲಿ ಸರಕಾರದ ಆದೇಶದಂತೆ, ಶೇಕಡಾ 2ರ ವಿನಾಯಿತಿ ನೀಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.6:26(2021)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಾದ ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಮತ್ತು ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳ ಕರಡು ಅಂತಿಮ ಸಾಮಾನ್ಯ ಜೇಷ್ಠತಾ ಪಟ್ಟಿಯ (ದಿನಾಂಕ 01.09.2021 ರಲ್ಲಿದ್ದಂತೆ) ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.6:27(2021)

ವಿಷಯ: ಶ್ರೀ ಸ್ವಾಮಿನಾಥನ್, ಹಿರಿಯ ಸಹಾಯಕರು, ಕುಲಸಚಿವರ ಕಚೇರಿ, ಮಂಗಳೂರು ವಿಶ್ವವಿದ್ಯಾನಿಲಯ ಇವರ ಪ್ರಕರಣಗಳ ಬಗ್ಗೆ ಕಾನೂನು ಅಭಿಪ್ರಾಯದಂತೆ ಕ್ರಮಕೈಗೊಳ್ಳುವ ಕುರಿತು

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪನ್ನು ಕಾಯ್ದಿರಿಸಿ, ಪ್ರಸ್ತುತ ಸದರಿಯವರಿಗೆ ತಾತ್ಕಾಲಿಕ ಪಿಂಚಣಿ ನೀಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ : ಸಾ.ಸ.6:28(2021)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅಳವಡಿಸಿರುವ Solar Roof Top Photo Voltaic Project (SRTPV)ಗೆ ಸಂಬಂಧಿಸಿದಂತೆ ಬಾಕಿ ಇರುವ ಬಿಲ್ಲುಗಳ ಪಾವತಿ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ : ಸಾ.ಸ.6:29(2021)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ವಿಭಾಗಗಳಲ್ಲಿ ಮತ್ತು ಘಟಕ ಕಾಲೇಜುಗಳಲ್ಲಿ ಹಮ್ಮಿಕೊಳ್ಳುವ ಶೈಕ್ಷಣಿಕ ಸಮ್ಮೇಳನ/ ಕಾರ್ಯಾಗಾರಗಳಿಗೆ ಸಂಬಂಧಿಸಿ ನಿಯಮ/ಮಾರ್ಗಸೂಚಿಗಳನ್ನು ರಚಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು : ಸಾ.ಸ.6:30 (2021)

ವಿಷಯ: ಸ್ನಾತಕೋತ್ತರ ಸಾಗರ ಭೂವಿಜ್ಞಾನ ಅಧ್ಯಯನ ಮಂಡಳಿಯ ಪುನರ್‌ರಚನೆಯ ಬಗ್ಗೆ.

ನಿರ್ಣಯ: ಸ್ನಾತಕೋತ್ತರ ಸಾಗರ ಭೂವಿಜ್ಞಾನ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು : ಸಾ.ಸ.6:31 (2021)

ವಿಷಯ: ಪದವಿ ಮಟ್ಟದ ಕನ್ನಡ ಅಧ್ಯಯನ ಮಂಡಳಿಯ ಪುನರ್‌ರಚನೆಯ ಬಗ್ಗೆ.

ನಿರ್ಣಯ: ಪದವಿ ಮಟ್ಟದ ಕನ್ನಡ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು : ಸಾ.ಸ.6:32 (2021)

ವಿಷಯ: ಸ್ನಾತಕೋತ್ತರ ಭೌತಶಾಸ್ತ್ರ ಅಧ್ಯಯನ ಮಂಡಳಿಯ ಪುನರ್‌ರಚನೆಯ ಬಗ್ಗೆ.

ನಿರ್ಣಯ: ಸ್ನಾತಕೋತ್ತರ ಭೌತಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಆಡಳಿತ : ಸಾ.ಸ.6:33(2021)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಕಚೇರಿ/ವಿಭಾಗಗಳ ಕಂಪ್ಯೂಟರ್ /ಪ್ರಿಂಟರ್‌ಗಳ ವಾರ್ಷಿಕ ನಿರ್ವಹಣೆಯ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು : ಸಾ.ಸ.6:34(2021)

ವಿಷಯ: ಡಾ. ಪಾರ್ವತಿ ಅಪ್ಪಯ್ಯ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ.

ವಿಷಯ1 Requesting the University to implement all the decisions taken by the Syndicate of Mangalore University in the previous meeting at the earliest.

ನಿರ್ಣಯ: ವಿಶ್ವವಿದ್ಯಾನಿಲಯದ ಸಿಂಡಿಕೇಟಿನಲ್ಲಿ ಕೈಗೊಳ್ಳಲಾಗುವ ಸಿಂಡಿಕೇಟು ನಿರ್ಣಯಗಳನ್ನು ಕಾಲಕಾಲಕ್ಕೆ ಅನುಷ್ಠಾನಕ್ಕೆ ತರಲಾಗುವುದು ಎಂಬುದಾಗಿ ತಿಳಿಸಲಾಯಿತು. ಕೆಲವೊಂದು ನಿರ್ಣಯಗಳನ್ನು ಅನುಷ್ಠಾನಗೊಳಿಸಲು ಸಮಯಾವಕಾಶದ ಅಗತ್ಯವಿರುವುದರಿಂದ ಸದರಿ ನಿರ್ಣಯಗಳನ್ನು ಅನುಷ್ಠಾನಗೊಳಿಸುವಲ್ಲಿ ಸ್ವಲ್ಪ ಮಟ್ಟಿನ ವಿಳಂಬವಾಗುವುದಾಗಿಯೂ ತಿಳಿಸಲಾಯಿತು.

| | |
|---|---|
| ವಿಷಯ2: | To consider the principle of rotation of headship once in two years in all departments of constituent colleges. |
| ನಿರ್ಣಯ: | ಈ ಬಗ್ಗೆ ಕ್ರಮ ಕೈಗೊಳ್ಳುವುದುದಾಗಿ ತಿಳಿಸಲಾಯಿತು. |
| ವಿಷಯ 3 | Regular academic and administrative Audit to be carried out in the constituent colleges/Chikkaluvara/Mangalore University |
| ನಿರ್ಣಯ: | ವಿಶ್ವವಿದ್ಯಾನಿಲಯ, ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೇಂದ್ರಗಳು ಮತ್ತು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಲ್ಲಿ Academic and Administrative Audit ನ್ನು ಅನುಷ್ಠಾನಕ್ಕೆ ತರಲಾಗುವುದೆಂಬುದಾಗಿ ತಿಳಿಸಲಾಯಿತು. |
| ವಿಷಯ 4: | Grievance Redressal Cell to be constituted to the university level to receive all the grievances from the teaching/non teaching and other stakeholders of the constituent colleges and regular redressal of these grievances. |
| ನಿರ್ಣಯ: | ಈಗಾಗಲೇ ವಿಶ್ವವಿದ್ಯಾನಿಲಯದಲ್ಲಿ ಅಸ್ತಿತ್ವದಲ್ಲಿರುವ Grievance Redressal Cellನ್ನು ವಿಶ್ವವಿದ್ಯಾನಿಲಯದ ಕ್ಯಾಂಪಸ್, ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೇಂದ್ರಗಳು ಮತ್ತು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳನ್ನೊಳಗೊಂಡಂತೆ ಕೇಂದ್ರೀಕರಿಸುವುದಾಗಿ ತಿಳಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಕಾನೂನು ಘಟಕ: ಸಾ.ಸ.6:35(2021) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ರಾಜ್ಯಶಾಸ್ತ್ರ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಡಾ. ಸಿ.ಎಂ. ರಾಜ್ ಪ್ರವೀಣ್ ಇವರನ್ನು ಇವರು ಮೂಲತ: ನೇರ ನೇಮಕಗೊಂಡಿದ್ದ ಘಟಕ ಕಾಲೇಜಾದ ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿಗೆ ವರ್ಗಾವಣೆಗೊಳಿಸಿ ಹೊರಡಿಸಿರುವ ಆದೇಶವನ್ನು ಪ್ರಶ್ನಿಸಿ ಸದರಿಯವರು ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ವಿರುದ್ಧ ಹೂಡಿರುವ ರಿಟ್ ಅರ್ಜಿ ಸಂಖ್ಯೆ : 18030/2021ಗೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯದ ಪರವಾಗಿ ಹೂಡಲ್ಪಟ್ಟಿರುವ ಆಕ್ಷೇಪಣಾ ಹೇಳಿಕೆಗಳ ಅನುಮೋದನೆ ಬಗ್ಗೆ. |
| ನಿರ್ಣಯ: | ಅನುಮೋದಿಸಲಾಯಿತು. |

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.6:36(2021)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ತಾತ್ಕಾಲಿಕ ನೆಲೆಯಲ್ಲಿ ಸೇವೆ ಸಲ್ಲಿಸಿ ಖಾಯಂಗೊಂಡಿರುವ 17 ಮಂದಿ ಬೋಧಕೇತರ ಸಿಬ್ಬಂದಿಗಳಿಗೆ 2010ರ ಹೈಕೋರ್ಟು ಆದೇಶದಂತೆ ನೀಡಲು ಬಾಕಿಯಿರುವ ಸೌಲಭ್ಯಗಳನ್ನು ಅನುಷ್ಠಾನಗೊಳಿಸುವ ಬಗ್ಗೆ.

ನಿರ್ಣಯ: ವಿಸ್ತೃತ ಚರ್ಚೆಯ ಅಗತ್ಯವಿರುವುದರಿಂದ ಪ್ರಸ್ತಾವನೆಯನ್ನು ಮುಂದೂಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.6:37(2021)

ವಿಷಯ: ಶ್ರೀ ಗೋವಿಂದ ಮಟ್ಟಿ, ಹಿರಿಯ ಸಹಾಯಕರು (ನಿವೃತ್ತ), ಮಂಗಳೂರು ವಿಶ್ವವಿದ್ಯಾನಿಲಯ ಇವರು ಗೈರುಹಾಜರಿಯಾದ ಅವಧಿಯನ್ನು ರಜೆ ಎಂದು ಪರಿಗಣಿಸಲು ಸಲ್ಲಿಸಿದ ಮನವಿ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಸದರಿಯವರ ಮನವಿಯನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿಕೊಂಡು, ಸದರಿಯವರು ಗೈರು ಹಾಜರಾದ ಅವಧಿ ದಿನಾಂಕ 19.05.2017ರಿಂದ ದಿನಾಂಕ 30.06.2018ರವರೆಗಿನ ಅವಧಿಗೆ ಗಳಿಕೆ ರಜೆ ಮತ್ತು ಪರಿವರ್ತಿತ ರಜೆಗಳನ್ನು ಲೆಕ್ಕಾಚಾರ ಮಾಡಿಕೊಂಡು, ಸದರಿಯವರ ಖಾತೆಗೆ ಜಮೆಗೊಳಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಇದನ್ನು ಪೂರ್ವೋದಾರಣೆಯೆಂದು (precedent) ಪರಿಗಣಿಸತಕ್ಕದ್ದಲ್ಲ ಎಂದು ಸ್ಪಷ್ಟಪಡಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.6:38(2021)

ವಿಷಯ: ಸಮಾಜಕಾರ್ಯ ವಿಭಾಗದ ಬೋಧಕ ಸಿಬ್ಬಂದಿಗಳ ದೂರಿನ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯ ಕೈಗೊಂಡ ಕ್ರಮಗಳನ್ನು ಕರ್ನಾಟಕ ರಾಜ್ಯ ಮಹಿಳಾ ಆಯೋಗಕ್ಕೆ ಸಲ್ಲಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಆಡಳಿತ : ಸಾ.ಸ.6:39(2021)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧಕ್ಕೆ ಪೀಠೋಪಕರಣಗಳ ಖರೀದಿಗೆ ಮಂಜೂರಾತಿ ನೀಡುವ ಬಗ್ಗೆ.

ನಿರ್ಣಯ: ದಿನಾಂಕ 29.09.2021ರ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ : ಸಾ.ಸ.6:40(2021)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ವಿವಿಧ ವಿಭಾಗ/ಕಛೇರಿಗಳಿಗೆ 10 ಸಂಖ್ಯೆಯ Projectors ಮತ್ತು 02 ಸಂಖ್ಯೆಯ UPS ಗಳನ್ನು ರೂಸಾ ಅನುದಾನದಿಂದ ಖರೀದಿಸುವ ಪ್ರಸ್ತಾವನೆ ಬಗ್ಗೆ.

ನಿರ್ಣಯ: ದಿನಾಂಕ 29.09.2021ರ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ : ಸಾ.ಸ.6:41(2021)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯದ ಸಲಹಾ ಸಮಿತಿ ಸಭೆಯ ನಡವಳಿಯ ಅನುಮೋದನೆಗಾಗಿ ಸಿಂಡಿಕೇಟ್ ಸಭೆಗೆ ಮಂಡಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ : ಸಾ.ಸ.6:42(2021)

ವಿಷಯ: ಡಾ. ಉಮೇಶ್ ನಾಯ್ಕ್, ಸಹಾಯಕ ಪ್ರಾಧ್ಯಾಪಕರು, ಗ್ರಂಥಾಲಯ ಹಾಗೂ ಮಾಹಿತಿ ವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ವಿರುದ್ಧ ವಿಭಾಗದ ವಿದ್ಯಾರ್ಥಿನಿಯರು ನೀಡಿರುವ ದೂರಿನ ಬಗ್ಗೆ.

ನಿರ್ಣಯ: ಗೌರವಾನ್ವಿತ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠದ (Divisional bench) ನ ತೀರ್ಪನ್ನು ಸಿಂಡಿಕೇಟು ಪರಿಗಣಿಸಿತು. ಪ್ರಕರಣವನ್ನು Internal Complaints Committee (ICC) ಯಲ್ಲಿ ಮಂಡಿಸಿ, ವಿಚಾರಣೆಯನ್ನು ಮುಂದುವರಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ : ಸಾ.ಸ.6:43(2021)

ವಿಷಯ: VGST ಪ್ರಾಜೆಕ್ಟ್, ಮಂಗಳೂರು ವಿಶ್ವವಿದ್ಯಾನಿಲಯ -ಉಪಕರಣ ಖರೀದಿ ಬಗ್ಗೆ

ನಿರ್ಣಯ: ದಿನಾಂಕ 29.09.2021ರ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ : ಸಾ.ಸ.6:44(2021)

ವಿಷಯ: SERB ಪ್ರಾಜೆಕ್ಟ್, ವಸ್ತುವಿಜ್ಞಾನ ವಿಭಾಗ - ಉಪಕರಣ ಖರೀದಿ ಬಗ್ಗೆ.

ನಿರ್ಣಯ: ದಿನಾಂಕ 29.09.2021ರ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಾರ್ವತ್ರಿಕ : ಸಾ.ಸ.6:45(2021) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಅನ್ವಯಿಕ ಪ್ರಾಣಿಶಾಸ್ತ್ರ ವಿಭಾಗದ ಪ್ರಯೋಗಾಲಯದಲ್ಲಿ ನಡೆದ ಘಟನೆ ಬಗ್ಗೆ. |
| ನಿರ್ಣಯ: | ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಸದರಿ ಪ್ರಕರಣವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿಕೊಂಡು, ವಿದ್ಯಾರ್ಥಿನಿಯ ವೈದ್ಯಕೀಯ ವೆಚ್ಚ ರೂ.41,920.00(ರೂಪಾಯಿ ನಲವತ್ತೊಂದು ಸಾವಿರದ ಒಂಬೈನೂರ ಇಪ್ಪತ್ತು ಮಾತ್ರ) ನ್ನು ಮರುಭರಣೆ ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. |
| ಕಾರ್ಯಸೂಚಿ ಸಂಖ್ಯೆ: | ಸಾರ್ವತ್ರಿಕ : ಸಾ.ಸ.6:46(2021) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಕಛೇರಿ/ವಿಭಾಗ/ಸ್ನಾತಕೋತ್ತರ ಕೇಂದ್ರ, ಚಿಕ್ಕಅಳುವಾರ ಮತ್ತು ಘಟಕ ಕಾಲೇಜು, ಇಲ್ಲಿಗೆ 2021-22ನೇ ಸಾಲಿನಿಂದ ಕಛೇರಿ ಸಾದಿಲ್ವಾರು ವೆಚ್ಚದ ಖಾಯಂ ಮುಂಗಡ ಮೊತ್ತದ ಪರಿಷ್ಕರಣೆ ಬಗ್ಗೆ. |
| ನಿರ್ಣಯ: | ಸಮಿತಿ ಸಭೆಯ ಶಿಫಾರಸ್ಸುಗಳನ್ನು ಅನುಮೋದಿಸಲಾಯಿತು. |
| ಕಾರ್ಯಸೂಚಿ ಸಂಖ್ಯೆ: | ಡಿಇವಿ : ಸಾ.ಸ.6:47(2021) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ ಕೈಗೊಳ್ಳಲಾಗಿರುವ ಅಂತರರಾಷ್ಟ್ರೀಯ ವಿದ್ಯಾರ್ಥಿಗಳಿಗೆ ವಸತಿ ನಿಲಯ, ತರಗತಿ ಕೊಠಡಿಗಳ ಸಂಕೀರ್ಣ ಕಟ್ಟಡ, ಅಡಿಟೋರಿಯಂ ಕಟ್ಟಡದ ಆಂತರಿಕ ಕಾಮಗಾರಿಗಳಿಗೆ ಸರ್ಕಾರದ ಘಟನೋತ್ತರ ಮಂಜೂರಾತಿ ನೀಡುವ ಬಗ್ಗೆ. |
| ನಿರ್ಣಯ: | ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಈ ಬಗ್ಗೆ ಸರಕಾರದ ಆದೇಶ ಸಂಖ್ಯೆ: ಇಡಿ 3 ಯುಡಿವಿ 2019 ದಿನಾಂಕ 05.06.2021ರಲ್ಲಿ ಸರಕಾರದ ನಿರ್ದೇಶನದಂತೆ ವೆಚ್ಚವನ್ನು ಮಂಗಳೂರು ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲಗಳಿಂದ ಭರಿಸಲು ತಿಳಿಸಿರುವ ವಿಷಯವನ್ನು ಸಿಂಡಿಕೇಟು ಸಭೆಯ ಗಮನಕ್ಕೆ ತರಲಾಯಿತು. |
| ಕಾರ್ಯಸೂಚಿ ಸಂಖ್ಯೆ: | ಡಿಇವಿ : ಸಾ.ಸ.6:48(2021) |
| ವಿಷಯ: | ಯುಜಿಸಿ CREPA ಪ್ರೋಗ್ರಾಂ, ಮಂಗಳೂರು ವಿಶ್ವವಿದ್ಯಾನಿಲಯ - ಉಪಕರಣ ಖರೀದಿಗೆ ಮಂಜೂರಾತಿ ನೀಡುವ ಬಗ್ಗೆ. |
| ನಿರ್ಣಯ: | ದಿನಾಂಕ 29.09.2021ರ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಡಿಇವಿ : ಸಾ.ಸ.6:49(2021) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ಮಂಗಳ ಸಭಾಂಗಣಕ್ಕೆ Projectorನ್ನು ಖರೀದಿಸುವ ಬಗ್ಗೆ. |
| ನಿರ್ಣಯ: | ದಿನಾಂಕ 29.09.2021ರ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಡಿಇವಿ : ಸಾ.ಸ.6:50(2021) |
| ವಿಷಯ: | ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರಿನ ಆವರಣದಲ್ಲಿ ಹಳೆ ವಿದ್ಯಾರ್ಥಿ ಸಂಘದ ವತಿಯಿಂದ ಕೊಡಮಾಡಿರುವ ಕಾಮಗಾರಿಗೆ ಸಂಬಂಧಿಸಿದ ಕೊರತೆ ಮೊತ್ತ ಭರಿಸಿಕೊಡಲು ಕಾಲೇಜಿನ 150ನೇ ವರ್ಷಾಚರಣೆಯಲ್ಲಿ ಸಂಗ್ರಹಿಸಲಾದ ಉಳಿಕೆ ಮೊತ್ತದಿಂದ ಪಾವತಿಸಲು ಮಂಜೂರಾತಿ ನೀಡುವ ಪ್ರಸ್ತಾವನೆ ಬಗ್ಗೆ. |
| ನಿರ್ಣಯ: | ವಿಸ್ತೃತ ಚರ್ಚೆಯ ಅಗತ್ಯವಿರುವುದರಿಂದ ಪ್ರಸ್ತಾವನೆಯನ್ನು ಮುಂದೂಡಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಆಡಳಿತ : ಸಾ.ಸ.6:51(2021) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಆವರಣ, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಹಾಗೂ ಜ್ಞಾನಕಾವೇರಿ ಸ್ನಾತಕೋತ್ತರ ಕೇಂದ್ರ, ಚಿಕ್ಕ ಅಳುವಾರ ಇಲ್ಲಿರುವ ಸಿ.ಸಿ. ಕ್ಯಾಮಾರಗಳ ವಾರ್ಷಿಕ ನಿರ್ವಹಣೆಯ ಬಗ್ಗೆ. |
| ನಿರ್ಣಯ: | ವಿಸ್ತೃತ ಚರ್ಚೆಯ ಅಗತ್ಯವಿರುವುದರಿಂದ ಸವಿವರ ಮಾಹಿತಿಯೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ನಿರ್ಣಯಿಸಲಾಯಿತು. |

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಾರ್ವತ್ರಿಕ : ಸಾ.ಸ.6:52(2021) |
| ವಿಷಯ: | ಎಸ್.ವಿ.ಪಿ. ಕನ್ನಡ ಅಧ್ಯಯನ ಸಂಸ್ಥೆಯ ಸಂಶೋಧನಾ ವಿದ್ಯಾರ್ಥಿನಿ ನೀಡಿದ ದೂರಿನ ಬಗ್ಗೆ. |
| ನಿರ್ಣಯ: | ಪ್ರಸ್ತಾವನೆಯನ್ನು ಕೂಲಂಕುಷವಾಗಿ ಚರ್ಚಿಸಲಾಯಿತು. ದಿನಾಂಕ 09.09.2021ರಂದು ನಡೆದ ಆಂತರಿಕ ದೂರು ಸಮಿತಿಯು ಸಂಶೋಧನಾ ವಿದ್ಯಾರ್ಥಿಯ ದೂರನ್ನು ಇತ್ಯರ್ಥಗೊಳಿಸಿ ನೀಡಿರುವ ವರದಿಯನ್ನು ಸಿಂಡಿಕೇಟು ಸಭೆ ಅಂಗೀಕರಿಸಿತು. |

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು : ಸಾ.ಸ.6:53(2021)

ವಿಷಯ: ಸ್ನಾತಕೋತ್ತರ ಕನ್ನಡ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

ನಿರ್ಣಯ: ಸ್ನಾತಕೋತ್ತರ ಕನ್ನಡ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು : ಸಾ.ಸ.6:54(2021)

ವಿಷಯ: ಸ್ನಾತಕೋತ್ತರ ವಾಣಿಜ್ಯ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

ನಿರ್ಣಯ: ಸ್ನಾತಕೋತ್ತರ ವಾಣಿಜ್ಯ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ : ಸಾ.ಸ.6:55(2021)

ವಿಷಯ: ಪ್ರಸಾರಾಂಗ, ಮಂಗಳೂರು ವಿಶ್ವವಿದ್ಯಾನಿಲಯ - ಪಠ್ಯಪುಸ್ತಕ ಮುದ್ರಿಸಿ ಪ್ರಕಟಿಸಲು ಟೆಂಡರು ಪ್ರಸಾವನೆಯ ಬಗ್ಗೆ.

ನಿರ್ಣಯ: ದಿನಾಂಕ 29.09.2021ರ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಇತರ ವಿಷಯಗಳು**

1. ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ವಿಭಾಗಕ್ಕೆ ಸಂಬಂಧಿಸಿದ ಆಂತರಿಕ ಲೆಕ್ಕ ಪರಿಶೋಧನೆ Double Entry System of Accounting ಗೆ ಸಂಬಂಧಿಸಿ ಇಬ್ಬರು Consultantಗಳನ್ನು ನಿಯಮಾನುಸಾರ ನೇಮಕಾತಿ ಮಾಡಿಕೊಳ್ಳಲು ದಿನಾಂಕ 23.07.2021ರ ಸಿಂಡಿಕೇಟು ಸಭೆಯಲ್ಲಿ ನಿರ್ಣಯಿಸಲಾಗಿದ್ದು, ಆದಷ್ಟು ಶೀಘ್ರವಾಗಿ ಇಬ್ಬರು Consultantಗಳನ್ನು ನೇಮಕಾತಿ ಮಾಡಿಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

2. ಶೈಕ್ಷಣಿಕ ವರ್ಷ 2020-21ನೇ ಸಾಲಿನ ಸ್ನಾತಕ ಕಾರ್ಯಕ್ರಮಗಳ ಸೆಮಿಸ್ಟರ್ ಪರೀಕ್ಷೆಗೆ ಕೋವಿಡ್ ಕಾರಣದಿಂದಾಗಿ ಗೈರು ಹಾಜರಾಗಿದ್ದಲ್ಲಿ ಸದರಿ ವಿದ್ಯಾರ್ಥಿಗಳಿಗೆ ವಿಶೇಷ ಪರೀಕ್ಷೆಗಳನ್ನು 15 ನವೆಂಬರ್ 2021ರೊಳಗಾಗಿ ನಡೆಸಲು ಸೂಕ್ತ ಕ್ರಮಕೈಗೊಳ್ಳುವಂತೆ ಸಿಂಡಿಕೇಟು ನಿರ್ಣಯಿಸಿತು.

3. ಮಂಗಳೂರು ವಿಶ್ವವಿದ್ಯಾನಿಲಯದ ಪರೀಕ್ಷಾ ಕಾರ್ಯಗಳಿಗೆ ಸಂಬಂಧಿಸಿ, Examination Reforms committee ಯನ್ನು ಈ ಕೆಳಗಿನಂತೆ ರಚಿಸಲಾಯಿತು.

1. ಡಾ. ಎಂ.ಎಸ್. ತಳವಾರ್ - ಅಧ್ಯಕ್ಷರು
ಸಿಂಡಿಕೇಟು ಸದಸ್ಯರು
2. ಪ್ರೊ. ಬಿ. ನಾರಾಯಣ - ಸದಸ್ಯರು
ಹಣಕಾಸು ಅಧಿಕಾರಿ (ಪ್ರಭಾರ), ಮಂವಿವಿ
3. ಡಾ. ಎನ್. ಪಿ. ನಾರಾಯಣ ಶೆಟ್ಟಿ - ಸದಸ್ಯರು
ಸಿಂಡಿಕೇಟು ಸದಸ್ಯರು ಹಾಗೂ ಪ್ರಾಂಶುಪಾಲರು,
ಭಂಡಾರ್‌ಕಾರ್ಸ್ ಆರ್ಟ್ಸ್ ಮತ್ತು ಸಾಯನ್ಸ್ ಕಾಲೇಜು,
ಕುಂದಾಪುರ - 576 201
4. ಡಾ. ಜೋಸೆಫ್ ಎನ್. ಎಂ. - ಸದಸ್ಯರು
ಪ್ರಾಂಶುಪಾಲರು, ಸೆಕ್ರೆಡ್ ಹಾರ್ಟ್ ಕಾಲೇಜು,
ಮಡಂತ್ಯಾರು - 574 224
5. ಡಾ. ಉಮ್ಮಪ್ಪ ಪೂಜಾರಿ ಪಿ. - ಸದಸ್ಯರು
ಸಹ ಪ್ರಾಧ್ಯಾಪಕರು, ವಾಣಿಜ್ಯ ವಿಭಾಗ
ಶ್ರೀ ಗೋಕರ್ಣನಾಥೇಶ್ವರ ಕಾಲೇಜು, ಮಂಗಳೂರು - 575003
6. ಡಾ. ಕುರಿಯನ್ - ಸದಸ್ಯರು
ಪ್ರಾಂಶುಪಾಲರು, ಆಳ್ವಾಸ್ ಕಾಲೇಜು,
ಮೂಡಬಿದರೆ - 574 227
7. ಶ್ರೀ ವಿ. ಜಿ. ಭಟ್ - ಸದಸ್ಯರು
ಪ್ರಾಂಶುಪಾಲರು, ಶ್ರೀ ವಿವೇಕಾನಂದ ಆರ್ಟ್ಸ್,
ಸಾಯನ್ಸ್ ಮತ್ತು ಕಾಮರ್ಸ್ ಕಾಲೇಜು,
ನೆಹರುನಗರ, ಪುತ್ತೂರು - 574 203
8. ಶ್ರೀ ಸುಧೀಶ ಪೂಜಾರಿ - ಸದಸ್ಯರು
ಪ್ರಾಂಶುಪಾಲರು, ಶ್ರೀದೇವಿ ಕಾಲೇಜು, ಬಲ್ಲಾಳ್‌ಬಾಗ್
ಮಂಗಳೂರು - 575 003
9. ಡಾ.ಅನಸೂಯ ರೈ - ಸದಸ್ಯರು
ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಾಲೇಜು,
ಮಂಗಳೂರು - 575 001
10. ಕುಲಸಚಿವರು (ಪರೀಕ್ಷಾಂಗ) - ಸದಸ್ಯ ಸಂಚಾಲಕರು

ಅಧಿಸೂಚನೆಯಲ್ಲಿ ಸಮಿತಿಯ Terms and reference ಗಳನ್ನು ಸ್ಪಷ್ಟಪಡಿಸಬೇಕೆಂಬುದಾಗಿಯೂ ನಿರ್ಣಯಿಸಲಾಯಿತು.

4. ಕಾರ್ಯಸೂಚಿ ಸಂಖ್ಯೆ ಸಾ.ಸ.4:55 (2021) ರ ನಿರ್ಣಯಕ್ಕೆ ದಿನಾಂಕ 27.08.2021ರಂದು ಸಿಂಡಿಕೇಟು ಸಭೆಯು ನೀಡಿರುವ ತಿದ್ದುಪಡಿ ನಿರ್ಣಯದನುಸಾರ, ಮಂಗಳೂರು ವಿಶ್ವವಿದ್ಯಾನಿಲಯದ ಅರ್ಹ ಶಿಕ್ಷಕೇತರ ಸಿಬ್ಬಂದಿಗಳಿಗೆ ದಿನಾಂಕ 01.10.2021ರಂದು ನೀಡಿರುವ ಭಡ್ತಿ ಆದೇಶಗಳಲ್ಲಿ ಹಿರಿಯ ಸಹಾಯಕ ಹುದ್ದೆಗೆ ಭಡ್ತಿ ನೀಡುವಾಗ ಪೋಷಕ ವೃಂದಗಳಾದ ಪ್ರಥಮ ದರ್ಜೆ ಸಹಾಯಕರು ಮತ್ತು ಶೀಘ್ರಲಿಪಿಗಾರರ ಭಡ್ತಿ ಅನುಪಾತ 4:1 ಎಂದು ಪರಿಗಣಿಸಲು ನಿರ್ಣಯಿಸಲಾಗಿದ್ದರೂ, ಸದರಿ ಆದೇಶಗಳಲ್ಲಿ ಅರ್ಹ ಶೀಘ್ರಲಿಪಿಗಾರರಿಗೆ ಭಡ್ತಿ ನೀಡದಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ, ಸದರಿ ಅರ್ಹ ಶೀಘ್ರಲಿಪಿಗಾರರ ಭಡ್ತಿ ಆದೇಶವನ್ನು ಈ ಕೂಡಲೇ ನೀಡಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

5. ವಿಶ್ವವಿದ್ಯಾನಿಲಯದ ಕೆಲವೊಂದು ಸಿಬ್ಬಂದಿಗಳು, ಸಿಂಡಿಕೇಟ್ ಸಭೆಯಲ್ಲಿ ಕೈಗೊಂಡ ನಿರ್ಣಯದ ವಿರುದ್ಧವಾಗಿ ವಿಶ್ವವಿದ್ಯಾನಿಲಯದ ಅಧಿಕಾರಿಗಳಿಗೆ ಪತ್ರವನ್ನು ಬರೆದಿರುವುದು ಸಿಂಡಿಕೇಟ್ ಸದಸ್ಯರ ಗಮನಕ್ಕೆ ಬಂದಿರುವುದಾಗಿ ತಿಳಿಸಿದ್ದು, ಸದರಿ ಸಿಬ್ಬಂದಿಗಳಿಂದ ವಿವರಣೆಯನ್ನು ಪಡೆಯಲು ಸಿಂಡಿಕೇಟ್ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು.

6. ಮಂಗಳೂರು ವಿಶ್ವವಿದ್ಯಾನಿಲಯುದ ಸಂಯೋಜಿತ ಕಾಲೇಜುಗಳಿಗೆ ನೀಡಲಾಗುತ್ತಿರುವ ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿಯನ್ನು ಈ ಶೈಕ್ಷಣಿಕ ವರ್ಷ 2021-22ನೇ ಸಾಲಿಗೆ ಮಾತ್ರ ಅನ್ವಯವಾಗುವಂತೆ ಶೇಕಡಾ 10 ರಿಂದ ಶೇಕಡಾ 20ಕ್ಕೇರಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

7. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕ ಕಾರ್ಯಕ್ರಮಗಳ ಒಂದು, ಮೂರು ಮತ್ತು ಐದನೇ ಸೆಮೆಸ್ಟರ್ ಪರೀಕ್ಷೆಗಳ ಫಲಿತಾಂಶವನ್ನು ಶೀಘ್ರದಲ್ಲಿ ಪ್ರಕಟಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

8. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ ವಿಭಾಗದ ಲ್ಯಾಬ್‌ನ್ನು ಉನ್ನತೀಕರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಮುಂದುವರಿದು, ಸದರಿ ಅಧ್ಯಯನ ವಿಭಾಗಕ್ಕೆ adjunct faculty ನೇಮಕ ಮಾಡಿಕೊಳ್ಳಲು ಸೂಕ್ತ ಕ್ರಮಕೈಗೊಳ್ಳಬೇಕೆಂಬುದಾಗಿಯೂ ನಿರ್ಣಯಿಸಲಾಯಿತು.

9. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 28(1)(ಡಿ) ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಡೀನರ ಜೇಷ್ಠತೆ ಮತ್ತು ಸರದಿಯ ಮೇರೆಗೆ ಸಿಂಡಿಕೇಟು ಸದಸ್ಯರಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂಡಿದ್ದ, ಪ್ರೊ. ಬಿ. ಉದಯ,

ಡೀನರು, ಕಲಾ ನಿಕಾಯ, ಹಾಗೂ ಪ್ರಾಧ್ಯಾಪಕರು, ಸ್ನಾತಕೋತ್ತರ ಇತಿಹಾಸ ಅಧ್ಯಯನ ವಿಭಾಗ, ಇವರ ಸದಸ್ಯತ್ವದ ಅವಧಿಯು ಕೊನೆಗೊಳ್ಳಲಿರುವುದರಿಂದ ಇವರಿಗೆ ಸಿಂಡಿಕೇಟು ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿತು.

ಮಾನ್ಯ ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/-
ಕುಲಪತಿಗಳು.

ಸಹಿ/-
ಕುಲಸಚಿವರು